# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎ.ಡಿ.ಈಶ್ವರಪ್ಪ ಹಾಗೂ ಶ್ರೀ ಎಂ.ಸಿ.ಶಂಕರಿಕೊಪ್ಪ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬ್ಯಾಡಗಿ ಇವರ ವಿರುದ್ಧದ ಆಪಾದನೆಗಳ ಬಗ್ಗೆ – ಇಲಾಖಾ ವಿಚಾರಣೆ – ದಂಡನೆ ವಿಧಿಸುವ ಕುರಿತು – ಆದೇಶ.

**ಓದಲಾಗಿದೆ.**

1. ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ ರವರ ಅನಧಿಕೃತ ಟಿಪ್ಪಣಿ ಸಂಖ್ಯೆ. ಯೋಇ / 11 / ಯೋವಿವಿ / 2008, ದಿನಾಂಕ. 27-05-2008.

2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ರವರ ಪತ್ರ ಸಂಖ್ಯೆ. ಹಾಜಿ ಪಂ/ಆಡಳಿತ-1/ಸಿಬ್ಬಂದಿ/ವಹಿ-54/ 2008-09/2230, ದಿನಾಂಕ.08-01-2009

3. ಕಾರಣ ಕೇಳುವ ನೋಟೀಸ್ ದಿನಾಂಕ. 24-08-2009

4. ಶ್ರೀ ಎಂ.ಸಿ.ಶಂಕರಿಕೊಪ್ಪ ಮತ್ತು ಶ್ರೀ ಎ.ಡಿ.ಈಶ್ವರಪ್ಪ ರವರುಗಳು ಸಲ್ಲಿಸಿರುವ ಲಿಖಿತ ಹೇಳಿಕೆ ದಿನಾಂಕ. 08-10-2009 ಮತ್ತು 06-11-2009

5. ಸರ್ಕಾರದ ಆದೇಶ ಸಂಖ್ಯೆ ಗ್ರಾಅಪ 23 ಇಎನ್‌ಕ್ಯೂ 2008 ದಿನಾಂಕ 9-8-2011.

6. ವಿಚಾರಣಾಧಿಕಾರಿಯವರು ವಿಚಾರಣಾ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿದ ದಿನಾಂಕ 14-05-2012

7. 2ನೇ ಕಾರಣ ಕೇಳುವ ನೋಟೀಸ್ ಸಂಖ್ಯೆ ಗ್ರಾಅಪ 23 ಇಎನ್‌ಕ್ಯೂ 2008 ದಿನಾಂಕ 8-6-2012

**ಪ್ರಸ್ತಾವನೆ:**

ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ದಿನಾಂಕ.27-05-2008ರಲ್ಲಿ ಶ್ರೀ ನೆಹರು ಚ. ಓಲೇಕಾರ, ಮಾಜಿ ಶಾಸಕರು, ಬ್ಯಾಡಗಿ ಇವರು ತಮ್ಮ ಅವಧಿಯಲ್ಲಿ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯಡಿ 2006-07ನೇ ಸಾಲಿನ ಅನುದಾನದಲ್ಲಿ ಸೂಚಿಸಿದಂತೆ (1) ಬ್ಯಾಡಗಿ ತಾಲ್ಲೂಕು ಬೆಳಕೇರಿ – ಬನ್ನಿಹಟ್ಟಿ ರಸ್ತೆ 0.0 ಕಿ.ಮೀ. ದಿಂದ 0.30 ಕಿ.ಮೀ. ರವರೆಗೆ ರೂ 1.00 ಲಕ್ಷದ ರಸ್ತೆ ನಿರ್ಮಾಣದ ಕಾಮಗಾರಿಗೆ ಮತ್ತು (2) ಬ್ಯಾಡಗಿ ತಾಲ್ಲೂಕು, ಚಿಕ್ಕಳ್ಳಿ ಸೂಡಂಬಿ ರಸ್ತೆ ನಿರ್ಮಾಣ 1.0 ದಿಂದ 1.75 ರವರೆಗೆ ರೂ. 2.00 ಲಕ್ಷಗಳ ರಸ್ತೆ ನಿರ್ಮಾಣದ ಕಾಮಗಾರಿಗಳಿಗೆ ಆಡಳಿತಾತ್ಮಕ ಮಂಜೂರಾತಿಯನ್ನು ಪಡೆಯದೇ ಸದರಿ ಕಾಮಗಾರಿಗಳನ್ನು ಪ್ರಾರಂಭಿಸಿದ್ದರಿಂದ ಹಾಗೂ ಮಾನ್ಯ ಶಾಸಕರ ಸ್ಥಳೀಯ ಪ್ರದೇಶಾಭಿವೃದ್ಧಿ ಯೋಜನೆಯ

----2

ಮಾರ್ಗಸೂಚಿಯಲ್ಲಿನ ನಿಯಮಗಳನ್ನು ಉಲ್ಲಂಘನೆ ಮಾಡಿರುವುದರಿಂದ ಸ.ಕಾ.ಇಂ., ಪಂ.ರಾ.ಇಂ.ಉಪ ವಿಭಾಗ, ಬ್ಯಾಡಗಿ ಇವರ ಮೇಲೆ ಶಿಸ್ತಿನ ಕ್ರಮವನ್ನು ಜರುಗಿಸಲು ಜಿಲ್ಲಾಧಿಕಾರಿ, ಹಾವೇರಿ ಜಿಲ್ಲೆ ರವರು ದಿನಾಂಕ. 22-02-2008ರ ಪತ್ರದಲ್ಲಿ ಪ್ರಸ್ತಾಪಿಸಿದ್ದು, ಅದನ್ನನುಸರಿಸಿ ದಿನಾಂಕ. 27-05-2008ರ ಯೋಜನಾ ಇಲಾಖೆಯ ಅನಧಿಕೃತ ಟಿಪ್ಪಣಿಯಲ್ಲಿ ಆರೋಪಿತರ ವಿರುದ್ಧ ಕ್ರಮ ಜರುಗಿಸುವಂತೆ ಈ ಇಲಾಖೆಯನ್ನು ಕೋರಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (2)ರಲ್ಲಿ ಓದಲಾದ ದಿನಾಂಕ. 08-01-2009ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ರವರು ಶ್ರೀ ಎ.ಡಿ.ಈಶ್ವರಪ್ಪ ಹಾಗೂ ಶ್ರೀ ಎಂ.ಸಿ.ಶಂಕರಿಕೊಪ್ಪ, ಅಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್‌ಗಳು, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗ, ಬ್ಯಾಡಗಿ ಇವರುಗಳ ಶಿಸ್ತು ಕ್ರಮ ಕೈಗೊಳ್ಳಲು ದೋಷಾರೋಪಣಾ ಪಟ್ಟಿ [ಅನುಬಂಧ- 1 ರಿಂದ 4 ] ಯನ್ನು ತಯಾರಿಸಿ ಸಲ್ಲಿಸಿದ್ದರು.

ಮೇಲೆ ಕ್ರಮ ಸಂಖ್ಯೆ (3)ರಲ್ಲಿ ಓದಲಾದ ದಿನಾಂಕ. 24-08-2009ರಲ್ಲಿ ಶ್ರೀ ಎಂ.ಸಿ.ಶಂಕರಿಕೊಪ್ಪ ಮತ್ತು ಶ್ರೀ ಎ.ಡಿ.ಈಶ್ವರಪ್ಪ ರವರುಗಳಿಗೆ ಕಾರಣ ಕೇಳುವ ನೋಟೀಸಿನೊಂದಿಗೆ ದೋಷಾರೋಪಣಾ ಪಟ್ಟಿಯನ್ನು ಅನುಬಂಧ-1 ರಿಂದ 4ನ್ನು ಜಾರಿ ಮಾಡಲಾಗಿತ್ತು.

ಶ್ರೀ ಎಂ.ಸಿ.ಶಂಕರಿಕೊಪ್ಪ ಮತ್ತು ಶ್ರೀ ಎ.ಡಿ.ಈಶ್ವರಪ್ಪ ರವರುಗಳು ಸರ್ಕಾರದ ಕಾರಣ ಕೇಳುವ ನೋಟೀಸಿಗೆ ಮೇಲೆ ಕ್ರಮ ಸಂಖ್ಯೆ (4)ರಲ್ಲಿ ಓದಲಾದ ದಿನಾಂಕ. 08-10-2009 ಮತ್ತು 06-11-2009 ಗಳಲ್ಲಿ ಲಿಖಿತ ಹೇಳಿಕೆಯನ್ನು ಸಲ್ಲಿಸುತ್ತಾ, ತಮ್ಮ ಮೇಲಿನ ಆರೋಪಗಳನ್ನು ನಿರಾಕರಿಸಿ, ಪ್ರಕರಣದಲ್ಲಿ ತಮ್ಮ ಮೇಲೆ ಮಾಡಲಾದ ಆರೋಪಗಳನ್ನು ಕೈಬಿಡುವಂತೆ ಕೋರಿದ್ದರು.

ಮೇಲೆ ಕ್ರಮ ಸಂಖ್ಯೆ (5)ರಲ್ಲಿ ಓದಲಾದ ದಿನಾಂಕ 9-8-2011ರ ಸರ್ಕಾರದ ಆದೇಶದಲ್ಲಿ ಶ್ರೀ ಎ.ಎ.ಹುಲಗೇರಿ, ನಿವೃತ್ತ ಜಿಲ್ಲಾ ನ್ಯಾಯಾಧೀಶರು ಇವರನ್ನು ವಿಚಾರಣಾಧಿಕಾರಿಯನ್ನಾಗಿ ನೇಮಿಸಲಾಗಿತ್ತು.

ಮೇಲೆ ಕ್ರಮ ಸಂಖ್ಯೆ (6)ರಲ್ಲಿ ಓದಲಾದ ದಿನಾಂಕ 14-05-2012ರಂದು ವಿಚಾರಣಾಧಿಕಾರಿಗಳು ವಿಚಾರಣಾ ವರದಿಯನ್ನು ಸಲ್ಲಿಸಿದ್ದು, ಸದರಿ ವರದಿಯಲ್ಲಿ ಶ್ರೀ ಎ.ಡಿ.ಈಶ್ವರಪ್ಪ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ರವರ ವಿರುದ್ಧದ ಆರೋಪಗಳು ಸಾಬೀತಾಗಿದೆ ಎಂದು ಹಾಗೂ ಶ್ರೀ ಎಂ.ಸಿ.ಶಂಕರಿಕೊಪ್ಪ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರ ವಿರುದ್ಧದ ಆರೋಪಗಳು ಸಾಬೀತಾಗಿಲ್ಲವೆಂದು ವರದಿ ಸಲ್ಲಿಸಿರುತ್ತಾರೆ.

ಮೇಲೆ ಕ್ರಮ ಸಂಖ್ಯೆ (6)ರಲ್ಲಿ ಓದಲಾದ ದಿನಾಂಕ 8-6-2012 ರಂದು ಆರೋಪಿತ ಅಧಿಕಾರಿಗಳಿಗೆ 2ನೇ ಕಾರಣ ಕೇಳುವ ನೋಟೀಸನ್ನು ಜಾರಿ ಮಾಡಲಾಗಿತ್ತು. ಆರೋಪಿತರು ಸಲ್ಲಿಸಿರುವ ಹೇಳಿಕೆಯಲ್ಲಿ ಅವರ ಸೇವಾ ಅವಧಿಯಲ್ಲಿ ಕಾಮಗಾರಿ ನಡೆದಿಲ್ಲವೆಂದು ಹಾಗೂ ಇದಕ್ಕೆ ಯಾವುದೇ ಸೂಕ್ತವಾದ ದಾಖಲೆಗಳು ಇರುವುದಿಲ್ಲವೆಂದು ಮತ್ತು ಕಾಮಗಾರಿಯ

----3

ಮಂಜೂರಾತಿಯಾಗಲೀ ಅಥವಾ ಆರ್ಥಿಕ ವೆಚ್ಚಕ್ಕಾಗಲೀ ಅವರಿಂದ ಯಾವುದೇ ಪ್ರಸ್ತಾವನೆಯನ್ನು ಮೇಲಾಧಿಕಾರಿಗಳ ಗಮನಕ್ಕೆ ಹಾಗೂ ಮಂಜೂರಾತಿಗಾಗಿ ಸಲ್ಲಿಸಿಲ್ಲವೆಂದು ವರದಿ ನೀಡುತ್ತಾ, ಈ ಎಲ್ಲಾ ಆರೋಪಗಳೂ ಸತ್ಯಕ್ಕೆ ದೂರವಾಗಿದೆ ಎಂದು ತಿಳಿಸಿ ಆರೋಪದಿಂದ ಮುಕ್ತಗೊಳಿಸುವಂತೆ ಕೋರಿರುತ್ತಾರೆ.

ಆರೋಪಿತರು ಸಲ್ಲಿಸಿರುವ ಲಿಖಿತ ಹೇಳಿಕೆಗಳಲ್ಲಿ ಯಾವುದೇ ಪರಿಗಣನಾರ್ಹವಾದ ಅಂಶಗಳು ಇರುವುದಿಲ್ಲದಿರುವುದನ್ನು ಮನಗಂಡು, ವಿಚಾರಣಾಧಿಕಾರಿಗಳ ವರದಿಯನ್ನು ಒಪ್ಪಿ, ಆರೋಪ ಸಾಬೀತಾದ ಶ್ರೀ ಎ.ಡಿ. ಈಶ್ವರಪ್ಪ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರಿಗೆ ದಂಡನೆ ವಿಧಿಸಲು ಹಾಗೂ ಆರೋಪ ಸಾಬೀತಾಗಿಲ್ಲದ ಶ್ರೀ ಎಂ.ಸಿ.ಶಂಕರಿಕೊಪ್ಪ, ಸಹಾಯಕ ಕಾರ್ಯಪಾಲಕ ಇಂಜಿನಿಯರ್ ಇವರನ್ನು ದೋಷಮುಕ್ತರನ್ನಾಗಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

<u>ಆದೇಶ ಸಂಖ್ಯೆ. ಗ್ರಾಅಪ 23 ಇಎನ್‌ಕ್ಯೂ 2008, ಬೆಂಗಳೂರು,</u>
<u>ದಿನಾಂಕ 26-08-2013</u>

ಮೇಲೆ ವಿವರಿಸಿರುವ ಕಾರಣಗಳ ಹಿನ್ನೆಲೆಯಲ್ಲಿ ಶ್ರೀ ಎ.ಡಿ.ಈಶ್ವರಪ್ಪ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ ಉಪ ವಿಭಾಗ, ಬ್ಯಾಡಗಿ ಇವರಿಗೆ ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957 ರ ನಿಯಮ 8 (iv-ಎ) ರನ್ವಯ ಅವರ ಕಾಲವೇತನ ಶ್ರೇಣಿಯಲ್ಲಿ ಎರಡು ಹಂತಗಳನ್ನು ಎರಡು ವರ್ಷಗಳ ಅವಧಿಗೆ ಇಳಿಸುವ ದಂಡನೆಯನ್ನು ವಿಧಿಸಿದೆ ಮತ್ತು ಸದರಿ ಅಧಿಕಾರಿಯು ಈ ಅವಧಿಯಲ್ಲಿ ಯಾವುದೇ ರೀತಿಯ ಬಡ್ತಿ ಪಡೆಯಲು ಅರ್ಹರಿರುವುದಿಲ್ಲ.

ಶ್ರೀ ಎಂ.ಸಿ.ಶಂಕರಿಕೊಪ್ಪ, ಹಿಂದಿನ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ ಉಪ ವಿಭಾಗ, ಬ್ಯಾಡಗಿ ಇವರ ವಿರುದ್ಧ ಆರೋಪಗಳು ಇಲಾಖಾ ವಿಚಾರಣಾ ವರದಿಯಲ್ಲಿ ಸಾಬೀತಾಗದೇ ಇರುವುದರಿಂದ ಅವರನ್ನು ದೋಷಮುಕ್ತರನ್ನಾಗಿ ಮಾಡಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಹೆಚ್.ಸಿ.ರಾಜಪ್ಪ),
ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು-ಎ),
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು (ಲೆಕ್ಕ ಪತ್ರ 1 & 2) / (ಆಡಿಟ್)
2. ಸರ್ಕಾರಕ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ / ಜಲಸಂಪನ್ಮೂಲ ಇಲಾಖೆ/ ಸಣ್ಣ ನೀರಾವರಿ ಇಲಾಖೆ.

----4

3. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು,
4. ಮುಖ್ಯ ಇಂಜಿನಿಯರ್, ಸಂಪರ್ಕ ಮತ್ತು ಕಟ್ಟಡಗಳು (ದಕ್ಷಿಣ), ಕೆ.ಆರ್.ಸರ್ಕಲ್, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ.
6. ಸಹಾಯಕ ಕಾರ್ಯದರ್ಶಿ(ಆಡಳಿತ), ಜಿಲ್ಲಾ ಪಂಚಾಯತ್, ಹಾವೇರಿ
7. ಸಂಬಂಧಪಟ್ಟ ಅಧಿಕಾರಿಗಳಿಗೆ – ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಹಾವೇರಿ ಇವರ ಮುಖಾಂತರ.
8. ಸರ್ಕಾರದ ಅಧೀನ ಕಾರ್ಯದರ್ಶಿ 1&2, ಯೋಜನೆ, ಕಾರ್ಯಕ್ರಮ ಸಂಯೋಜನೆ ಮತ್ತು ಸಾಂಖ್ಯಿಕ ಇಲಾಖೆ.
9. ಸರ್ಕಾರದ ಅಧೀನ ಕಾರ್ಯದರ್ಶಿ, ಲೋಕೋಪಯೋಗಿ ಇಲಾಖೆ, (ಸೇವೆಗಳು-ಎ & ಸಿ)
10. ಗ್ರಾ.ಅ.ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ.
11. ಗ್ರಾ.ಅ.ಪಂ.ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ / ಕಾರ್ಯದರ್ಶಿ (ಪಂ.ರಾಜ್)/ ಉಪ ಕಾರ್ಯದರ್ಶಿ ಇವರುಗಳ ಅಪ್ತ ಕಾರ್ಯದರ್ಶಿ / ಆಪ್ತ ಸಹಾಯಕರಿಗೆ.
12. ಮೇಲ್ವಿಚಾರಕರು, ಗಣಕಯಂತ್ರ ಕೋಶ, ಗ್ರಾ.ಅ.ಪಂ.ರಾಜ್ ಇಲಾಖೆ.
13. ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.